Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
**Udyog Vidya Nagar, Haliyal – 581329, Dist: Uttar Kannada (Karnataka)**
**Phone: 08284-220861, 220334, 221409, Fax: 08284-220813**
**www.klsvdit.edu.in** **principal@klsvdit.edu.in**

Date: 19-02-2022

**ಪತ್ರಿಕಾ ಪ್ರಕಟಣೆ:**

## ಕುಸ್ತಿಯಲ್ಲಿ ಯುನಿವರ್ಸಿಟಿ ಬ್ಲ್ಯೂ ಆಗಿ ಆಯ್ಕೆ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ, ಹಳಿಯಾಳದ ಮೆಕ್ಯಾನಿಕಲ್ ಇಂಜನಿಯರಿಂಗ್ ವಿದ್ಯಾರ್ಥಿ ಜೋನಾಥನ್ ಎಮ್ ಎಫ್ ಮತ್ತು ಇಲೆಕ್ಟ್ರಿಕಲ್ ಇಂಜನಿಯರಿಂಗ್ ವಿದ್ಯಾರ್ಥಿನಿ ದಿವ್ಯಾ ಪಡವಲಕರ್ ಅವರು ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಕುಸ್ತಿ ವಿಭಾಗದಲ್ಲಿ ಬ್ಲ್ಯೂ ಆಗಿ ಆಯ್ಕೆಯಾಗಿದ್ದಾರೆ. ಈ ವಿದ್ಯಾರ್ಥಿಗಳು ಹರಿಯಾಣಾ ರಾಜ್ಯದ ಭಿವಾನಿಯ ಚೌಧರಿ ಬನ್ಸಿಲಾಲ್ ವಿಶ್ವವಿದ್ಯಾಲಯದಲ್ಲಿ ಮಾರ್ಚ್ 7 ರಿಂದ 16 ರ ವರೆಗೆ ನಡೆಯಲಿರುವ ಅಂತರ್ ವಿಶ್ವವಿದ್ಯಾಲಯಗಳ ಕುಸ್ತಿ ಪಂದ್ಯಾವಳಿಯಲ್ಲಿ ಭಾಗವಹಿಸಲಿದ್ದಾರೆ.

ಈ ಪಂದ್ಯಾವಳಿಯಲ್ಲಿ ಭಾಗವಹಿಸಲಿರುವ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಪುರುಷರ ಕುಸ್ತಿ ತಂಡಕ್ಕೆ ಮಹಾವಿದ್ಯಾಲಯದಲ್ಲಿ ಮಾರ್ಚ್ 1 ರಿಂದ 6 ರ ತನಕ ಮತ್ತು ಮಹಿಳೆಯರ ತಂಡಕ್ಕೆ ಮಾರ್ಚ್ 8 ರಿಂದ 13 ರ ತನಕ ತರಬೇತಿ ಶಿಬಿರ ಆಯೋಜಿಸಲಾಗಿದೆ. ವಿದ್ಯಾರ್ಥಿಗಳ ಈ ಸಾಧನೆಗೆ ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್, ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ, ದೈಹಿಕ ಶಿಕ್ಷಣ ನಿರ್ದೇಶಕರಾದ ಶ್ರೀ. ಗದಿಗೆಪ್ಪಾ ಯಳ್ಳೂರ್ ಮತ್ತು ಸಿಬ್ಬಂದಿ ವರ್ಗದವರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal



ಜೋನಾಥನ್ ಎಮ್ ಎಫ್



ದಿವ್ಯಾ ಪಡವಲಕರ್